ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ7[2]ಪ್ರಾಶಿಅ.ಹೊ.ಶಾ.ನೋಂ.104/2019-20 ದಿನಾಂಕ:12ನೇ ಮಾರ್ಚ್ 2020

**: : ಸುತ್ತೋಲೆ : :**

ವಿಷಯ: 2020-21ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನರಹಿತ ಪೂರ್ವಪ್ರಾಥಮಿಕ/ ಪ್ರಾಥಮಿಕ / ಪ್ರೌಢಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಕುರಿತು ನೋಂದಾಯಿತ ಅರ್ಹ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:25-11-2019, ದಿನಾಂಕ:21-1-2020

*****

2020-21ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನರಹಿತ ಪೂರ್ವ ಪ್ರಾಥಮಿಕ/ಪ್ರಾಥಮಿಕ ಕಿರಿಯ, ಹಿರಿಯ ಹಾಗೂ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಸಂಸ್ಥೆಗಳು ಆನ್‌ಲೈನ್ ಮುಖಾಂತರ ದಿ:23-12-2019 ರಿಂದ ದಿ:15-2-2020ರವರೆಗೆ ಇಲಾಖಾ ವೆಬ್‌ಸೈಟ್‌ನಲ್ಲಿ [www.schooleducation.kar.nic.in] ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಆದರೆ ಪ್ರಸ್ತುತ ಆಡಳಿತಾತ್ಮಕ ದೃಷ್ಟಿಯಿಂದ ಸರ್ಕಾರವು ಹೊಸ ಶಾಲೆಗಳ ನೊಂದಣಿ ದಿನಾಂಕವನ್ನು 20-**03-2020**ರವರೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ವಿಸ್ತರಿಸುವಂತೆ ಆದೇಶಿಸಿರುತ್ತದೆ.

ಆದ್ದರಿಂದ **ಹೊಸ ಶಾಲೆಗಳ ನೋಂದಣಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮವಾಗಿ ದಿನಾಂಕ:20-3-2020ರವರೆಗೆ ವಿಸ್ತರಿಸಿದೆ.**

"ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆದೇಶದ ಮೇರೆಗೆ "

[ಡಾ:ಕೆ.ಜಿ.ಜಗದೀಶ ಭಾ.ಆ.ಸೇ]

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು[ಆಡಳಿತ] ರವರಿಗೆ
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಪ್ರತಿಯನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ] ಇವರ ಆಪ್ತ ಶಾಖೆ, ಇವರಿಗೆ ಕಳುಹಿಸುತ್ತಾ ಮಾನ್ಯ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು [ಪ್ರೌಢ ಶಿಕ್ಷಣ) ಇವರ ಗಮನಕ್ಕೆ ತರಲು ಕೋರಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ ಇವರಿಗೆ ಕಳುಹಿಸುತ್ತಾ ನಿಯಮಾನುಸಾರ ಕ್ರಮವಹಿಸಲು ತಿಳಿಸಿದೆ.
3. ನಿರ್ದೇಶಕರು ಪ್ರಾಥಮಿಕ ಶಿಕ್ಷಣ ಇವರ ಆಪ್ತ ಶಾಖೆಗೆ ಕಳುಹಿಸುತ್ತಾ ನಿರ್ದೇಶಕರ ಗಮನಕ್ಕೆ ತರಲು ತಿಳಿಸಿದೆ.
4. ನಿರ್ದೇಶಕರು ಪ್ರೌಢ ಶಿಕ್ಷಣ ಇವರ ಆಪ್ತ ಶಾಖೆಗೆ ಕಳುಹಿಸುತ್ತಾ ನಿರ್ದೇಶಕರ ಗಮನಕ್ಕೆ ತರಲು ತಿಳಿಸಿದೆ.
5. ಕಾರ್ಯಕ್ರಮಾಧಿಕಾರಿಗಳು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಇದರೊಂದಿಗೆ ಲಗತ್ತಿಸಿರುವ ಚೆಕ್‌ಲಿಸ್ಟ್‌ನಂತೆ ತಂತ್ರಾಂಶವನ್ನು ಅಭಿವೃದ್ಧಿ ಪಡಿಸುವುದಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
7. ಪ್ರೋಗ್ರಾಮರ್, ಸಾಫ್ಟ್‌ವೇರ್ ಡೆವಲಪ್ ಮೆಂಟ್ ಸೆಂಟರ್, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಅಗತ್ಯ ಕ್ರಮಕ್ಕಾಗಿ.
8. ಕಛೇರಿ ಪ್ರತಿ.